## ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 31 ಎಂಎನ್‌ಇ 2025(ಇ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:18.02.2025.

### ಅಧಿಸೂಚನೆ

ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 78 ಟಿಡಿಪಿ 2024, ದಿ:07.11.2024 ರಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ಕ್ಕೆ ಸರ್ಕಾರದ ಅನುಮೋದನೆ ನೀಡಲಾಗಿದೆ ಹಾಗೂ ಪ್ರವಾಸೋದ್ಯಮಕ್ಕೆ ಅನ್ವಯಿಸಿದ ಯೋಜನೆಗಳಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳಿಂದ ನೀಡುವ ಸೌಲಭ್ಯ, ರಿಯಾಯಿತಿಗಳ ಕುರಿತು ಸಂಬಂಧಿಸಿದ ಇಲಾಖೆಗಳು ಪ್ರತ್ಯೇಕ ಆದೇಶಗಳನ್ನು ಹೊರಡಿಸಲು ನಿರ್ದೇಶಿಸಲಾಗಿರುತ್ತದೆ.

ಪ್ರವಾಸೋದ್ಯಮ ನೀತಿಯಡಿಯಲ್ಲಿ ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಪ್ರಸ್ತಾಪಿಸಿರುವ ಪ್ರೋತ್ಸಾಹಕಗಳನ್ನು ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಬಿಬಿಎಂಪಿ ಹೊರತುಪಡಿಸಿ) ಅಳವಡಿಸಿಕೊಳ್ಳಲು ಕರ್ನಾಟಕ ಪೌರ ಕಾಯ್ದೆ 1964 ರ ಕಲಂ 141 ರಲ್ಲಿ ಹಾಗೂ ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯ್ದೆ, 1976 ರ ಕಲಂ 146 ರಡಿ ಪ್ರದತ್ತವಾಗಿರುವ ಅಧಿಕಾರದಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ:ನಅಇ 07 ಯುಡಬ್ಲ್ಯೂಎಸ್ 2011, ದಿ:20.07.2011 ರಲ್ಲಿ ಸೂಚಿಸಿರುವ ನೀರಿನ ದರಗಳನ್ವಯ ಪ್ರವಾಸೋದ್ಯಮ ನೀತಿಗೆ ಒಳಪಡುವ ಯೋಜನೆಗಳಿಗೆ ಕೆಳಕಂಡಂತೆ ವಿನಾಯಿತಿ ನೀಡಿ ಆದೇಶಿಸಿದೆ.

1. ಪ್ರವಾಸೋದ್ಯಮ ಇಲಾಖೆಯು ಪರಿಭಾಷಿಸುವ ಹೋಂ-ಸ್ಟೇಗಳಿಗೆ ವಾಣಿಜ್ಯೇತರ (Non-Commercial) ಚಟುವಟಿಕೆ ಎಂದು ಪರಿಗಣಿಸಿ, ನೀರಿನ ದರವನ್ನು ಗೃಹ ಬಳಕೆ ದರದಲ್ಲಿ ಹಾಗೂ ಆಸ್ತಿ ತೆರಿಗೆಯನ್ನು ವಸತಿ ಉಪಯೋಗದ ದರಗಳಂತೆ ಸ್ಥಳೀಯ ಸಂಸ್ಥೆಗಳು ವಿಧಿಸುವುದು.
2. ಬೆಡ್ & ಬ್ರೇಕ್ ಫಾಸ್ಟ್ ಯೋಜನೆಗಳನ್ನು ವಾಣಿಜ್ಯ ಚಟುವಟಿಕೆ ಎಂದು ಪರಿಗಣಿಸಿ ನೀರಿನ ದರವನ್ನು ವಾಣಿಜ್ಯ ಬಳಕೆ ದರದಲ್ಲಿ ಹಾಗೂ ಆಸ್ತಿ ತೆರಿಗೆಯನ್ನು ವಾಣಿಜ್ಯ ಉಪಯೋಗದ ದರಗಳಂತೆ ಸ್ಥಳೀಯ ಸಂಸ್ಥೆಗಳು ವಿಧಿಸುವುದು.
3. ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯಿಂದ ಕೈಗಾರಿಕಾ ಉದ್ದಿಮೆ ದರ್ಜೆಯನ್ನು ನೀಡಲಾಗುವ ಪ್ರವಾಸೋದ್ಯಮ ಯೋಜನೆಗಳಿಗೆ ಮತ್ತು ವಿಸ್ತರಣಾ ಯೋಜನೆಗಳಿಗೆ ಕೈಗಾರಿಕಾ ಉಪಯೋಗದ ದರಗಳಂತೆ ಆಸ್ತಿ ತೆರಿಗೆ ಮತ್ತು ನೀರಿನ ದರವನ್ನು ಸ್ಥಳೀಯ ಸಂಸ್ಥೆಗಳು ವಿಧಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

K. Nagesh 18/2/2025
**(ನಾಗೇಶ್ ಕೆ.)**
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ
(ಮಹಾನಗರ ಪಾಲಿಕೆ-2)

18/02/25

**ಇವರಿಗೆ:**

ಸಂಕಲನಕಾರರು, ಕರ್ನಾಟಕ ವಿಶೇಷ ರಾಜ್ಯ ಪತ್ರ, ವಿಕಾಸಸೌಧ, ಬೆಂಗಳೂರು ಇವರಿಗೆ ಪ್ರಕಟಿಸಲು ಹಾಗೂ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ ಇವರಿಗೆ ಕಳುಹಿಸುವಂತೆ ಕೋರಿದೆ.

...2

**ಪ್ರತಿ:**

1. ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಎ) ಮತ್ತು (ಎ & ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿ.ವಿ.ಗೋಪುರ, ಬೆಂಗಳೂರು.
5. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರು / ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು / ಮುಖ್ಯಾಧಿಕಾರಿಗಳಿಗೆ (ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.